**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 1724/2022**

| | | | |
|---|---|---|---|
| **ಹೆಸರು** | : | **ಸಂಜುಕುಮಾರ** | ಚಾ.ಸಾ. 3 |
| **ತಂದೆಯ ಹೆಸರು** | : | **ಲಕ್ಷ್ಮಣ** | ಪ್ರಾ.ಸಾ. 1 |
| **ವಯಸ್ಸು** | : | **30 ವರ್ಷ** | ದಿನಾಂಕಃ 15-05-2025 |
| **ಉದ್ಯೋಗ** | : | **ಕೂಲಿಕೆಲಸ** | |
| **ವಾಸಸ್ಥಳ** | : | **ಚಿಂಚೋಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ-1, 2, 4 ರಿಂದ 8 ರವರು ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿ ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯನ್ನು ನಿಪಿ-1 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಈಗ 3 ವರ್ಷಗಳ ಹಿಂದೆ ನಾನು ಪೋಲಿಸ ಠಾಣೆಗೆ ಹೋದಾಗ ಪೋಲಿಸರು ಒಂದು ಖಾಲಿ ದಾಖಲೆ ಮೇಲೆ ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದರು ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತಿ ಮಾಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಜಪ್ತಿ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕಃ 28-09-2022 ರಂದು ಚಾಸಾ-1ರವರು ನನಗೆ ಹಾಗೂ ಚಾಸಾ-2ರವರಿಗೆ ಕರೆದು ಐನೋಳ್ಳಿ ಗ್ರಾಮದಲ್ಲಿ ಯಾರೋ ಒಬ್ಬ ವ್ಯಕ್ತಿ ಅಕ್ರಮವಾಗಿ ಸರಕಾರದ ಪಡಿತರ ಅಕ್ಕಿ ಸಂಗ್ರಹಿಸಿಟ್ಟಿರುವ ಬಗ್ಗೆ ಬಾತ್ಮಿ ಬಂದಿದೆ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ-1ರವರು ಹಾಗೂ ಪೋಲಿಸರು ನನಗೆ ಕರೆದುಕೊಂಡು ಐನೋಳ್ಳಿ ಗ್ರಾಮಕ್ಕೆ ಕರೆದುಕೊಂಡು ಹೋಗಿ ಅಲ್ಲಿ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಮನೆಯಲ್ಲಿ ದಾಳಿ ಮಾಡಿದಾಗ ಅವನ ಮನೆಯಲ್ಲಿ 40-45 ಕೆ.ಜಿ. ಉಳ್ಳ 23 ಅಕ್ಕಿ ಚೀಲಗಳು ಕಂಡು ಬಂದಿರುತ್ತವೆ ಎಂದರೆ ಸರಿಯಲ್ಲ. ಆಗ ಚಾಸಾ-1ರವರು ನನ್ನ ಹಾಗೂ ಚಾಸಾ-2ರವರ ಸಮಕ್ಷಮ ಜಪ್ತಿ

ಪಂಚನಾಮೆಯನ್ನು ಜರುಗಿಸಿ ಅಕ್ಕಿ ಚೀಲಗಳನ್ನು ಜಪ್ತಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರೂ ಆರೋಪಿಯ_ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ SNB ವಕೀಲರಿಂದಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**